# All India Radio: Bangalore
# Regional Bulletin In Kannada
# 10.10.2025 / 2.30 p.m.
## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

**<><><><>**

ಮುಖ್ಯಾಂಶಗಳು

1. ದೇಶದ ಮಾರುಕಟ್ಟೆ ವಲಯದಲ್ಲಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಪಾಲು ಶೇಕಡ ೪೫ರಷ್ಟಿದೆ ; ಸಚಿವೆ ಶೋಭಾ ಕರಂದ್ಲಾಜೆ
2. ಒಂದು ಸಾವಿರದ ೨೦೦ ಚದರಡಿಯಲ್ಲಿ ಮನೆ ನಿರ್ಮಿಸಿಕೊಂಡವರಿಗೆ ನಿರಪೇಕ್ಷಣಾ ಪತ್ರವಿಲ್ಲದೆ ವಿದ್ಯುತ್ ಮತ್ತು ನೀರಿನ ಸಂಪರ್ಕ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
3. ಶಾಸನ ಸಭೆಗಳ ಸಬಲೀಕರಣದಿಂದ ಪ್ರಜಾಪ್ರಭುತ್ವ ಸಧೃಡ - ಸಭಾಪತಿ ಬಸವರಾಜ ಹೊರಟ್ಟಿ
4. ಸುಪ್ರಸಿದ್ಧ ಹಾಸನಾಂಬೆ ದರ್ಶನಕ್ಕೆ ಇಂದಿನಿಂದ ಅವಕಾಶ ; ಸಿದ್ಧತೆ ಪರಿಶೀಲಿಸಿದ ಸಚಿವ ಕೃಷ್ಣ ಬೈರೇಗೌಡ

<><><><>

ದೇಶದ ಮಾರುಕಟ್ಟೆ ವಲಯದಲ್ಲಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಪಾಲು ಶೇಕಡ ೪೫ರಷ್ಟಿದ್ದು, ಎಂಎಸ್‌ಎಂಇ ದೇಶದ ಆರ್ಥಿಕತೆಗೆ ಪ್ರಮುಖ ಶಕ್ತಿಯಾಗಿದೆ ಎಂದು ಕೇಂದ್ರ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರಿನ ಕಾಸಿಯಾ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ತಂತ್ರಜ್ಞಾನ ಮತ್ತು ಮಾರುಕಟ್ಟೆ ವಲಯದಲ್ಲಿ ಹಲವು ಸಮಸ್ಯೆಗಳಿದ್ದು, ಅವುಗಳನ್ನು ನಿಭಾಯಿಸುವುದು ಪ್ರಮುಖ ಸವಾಲು ಎಂದು ಅವರು ತಿಳಿಸಿದರು. ಇತ್ತೀಚೆಗೆ ಜಿಎಸ್‌ಟಿ ದರಗಳನ್ನು ಇಳಿಸಲಾಗಿದ್ದು, ಇದರಿಂದ ಜನಸಾಮಾನ್ಯರಿಗೆ ಅನುಕೂಲವಾಗಿದೆ. ಜಿಎಸ್‌ಟಿ ವಲಯದಲ್ಲಿ ಮತ್ತಷ್ಟು ಸುಧಾರಣೆಗೆ ಆದ್ಯತೆ ನೀಡಲಾಗುವುದು. ಕೈಗಾರಿಕೆಗಳಿಗೆ ಸೂಕ್ತ ರೀತಿಯಲ್ಲಿ ಅನುಕೂಲವಾಗವಂತೆ ಮುಂಬರುವ ದಿನಗಳಲ್ಲಿ ಅಗತ್ಯ ನಿರ್ಧಾರಗಳನ್ನು ತೆಗೆದುಕೊಳ್ಳಲಾಗುವುದು ಎಂದರು.

**ಧ್ವನಿ : ಶೋಭಾ ಕರಂದ್ಲಾಜೆ (೨೮ ಸೆಕೆಂಡ್‌ಗಳು)**

<><><><>

ಸಾವಿರದ ಇನ್ನೂರು ಚದರಡಿ ಜಾಗದಲ್ಲಿ ಮನೆ ನಿರ್ಮಿಸಿಕೊಂಡವರಿಗೆ ನಿರಪೇಕ್ಷಣಾ ಪತ್ರ ಇಲ್ಲದೆ ವಿದ್ಯುತ್ ಮತ್ತು ನೀರಿನ ಸಂಪರ್ಕ ಕೊಡಲು ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದು

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಕೋಲಾರ ಜಿಲ್ಲೆಯ ಮಾಲೂರಿನಲ್ಲಿ ನಿನ್ನೆ ನಡೆದ ಗಣೇಶೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಎತ್ತಿನಹೊಳೆ ಯೋಜನೆಯಿಂದ ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ನೀರು ಕೊಡುವುದು ಖಚಿತ ಎಂದರು.

<><><>

ಪ್ರಜಾಪ್ರಭುತ್ವದ ಜೀವಾಳವಾಗಿರುವ ಶಾಸನ ಸಭೆಗಳ ವ್ಯವಸ್ಥಿತ ಸಬಲೀಕರಣದಿಂದ ಪ್ರಜಾಪ್ರಭುತ್ವ ಸಧೃಡಗೊಂಡು ನಾಗರೀಕರ ಅಭ್ಯುದಯದ ಆಶಯಗಳ ಈಡೇರಿಕೆ ಸಾಧ್ಯ ಎಂದು ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದ್ದಾರೆ. ಬಾರ್ಬಡೋಸ್ ದೇಶದ ರಾಜಧಾನಿ ಬ್ರಿಡ್ಜ್‌ಟೌನ್‌ನಲ್ಲಿ ೬೮ನೇ ಕಾಮನ್‌ವೆಲ್ತ್ ಸಂಸದೀಯ ಸಮಾವೇಶದಲ್ಲಿ ಮಾತನಾಡಿದ ಅವರು, ಪ್ರಜಾಪ್ರಭುತ್ವದ ಯಶಸ್ಸಿಗೆ, ಶಾಸನ ಸಭೆಗಳ ಹಾಗೂ ಜನಪ್ರತಿನಿಧಿಗಳ ಕ್ರೀಯಾಶೀಲತೆ ಮತ್ತು ಪಕ್ಷಬೇಧವಿಲ್ಲದ ಅಭಿವೃದ್ಧಿ ಪರ ಚಿಂತನೆ ಅಗತ್ಯವಾಗಿದೆ ಎಂದರು. ಇದೇ ವೇಳೆ ಸಭಾಪತಿ ಬಸವರಾಜ ಎಸ್. ಹೊರಟ್ಟಿ ಹಾಗೂ ವಿಧಾನ ಸಭ್ಯಾಧ್ಯಕ್ಷ ಯು.ಟಿ.ಖಾದರ್ ಅವರು, ಬಾರ್ಬೋಡ ಪ್ರಧಾನಿ ಮಿಯಾ ಅಮೂರ್ ಮೂಟ್ಲೆ ಅವರನ್ನು ಭೇಟಿ ಮಾಡಿ ಚರ್ಚಿಸಿದರು.

<><><>

ಮೂರನೇ ಹಂತದ ಕೃಷ್ಣಾ ಮೇಲ್ದಂಡೆ ಯೋಜನೆಯ ಭೂಸ್ವಾಧೀನ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ. ಈ ಸಂಬಂಧ ನ್ಯಾಯಮಂಡಳಿ ನೀಡಿರುವ ತೀರ್ಪು, ಮತ್ತಿತರ ಕಾನೂನಾತ್ಮಕ ಮತ್ತು ಆಡಳಿತಾತ್ಮಕ ವಿಷಯಗಳಿಗೆ ಸಂಬಂಧಿಸಿದ ಪ್ರಸ್ತಾವನೆಗಳಿಗೆ ಅನುಮೋದನೆ ನೀಡಿ, ಸರ್ಕಾರಿ ಅಧಿಸೂಚನೆ ಹೊರಡಿಸಲಾಗಿದೆ. ಮುಳುಗಡೆ ಪ್ರದೇಶದ ಖುಷ್ಕಿ ಜಮೀನಿಗೆ ಪ್ರತಿ ಎಕರೆಗೆ ೩೦ ಲಕ್ಷ ರೂಪಾಯಿ, ತರಿ ಜಮೀನಿಗೆ ೪೦ ಲಕ್ಷ ರೂಪಾಯಿ, ಕಾಲುವೆ ಜಮೀನುಗಳ ಭೂಸ್ವಾಧೀನಕ್ಕಾಗಿ ಖುಷ್ಕಿ ಭೂಮಿಗೆ ೨೫ ಹಾಗೂ ತರಿ ಜಮೀನಿಗೆ ೩೦ ಲಕ್ಷ ರೂಪಾಯಿ ನಿಗದಿ ಮಾಡಲಾಗಿದೆ ಎಂದು ಜಲಸಂಪನ್ಮೂಲ ಇಲಾಖೆ ತಿಳಿಸಿದೆ.

<><><>

ಸುಪ್ರಸಿದ್ಧ ಹಾಸನಾಂಬೆ ದರ್ಶನಕ್ಕೆ ಇಂದಿನಿಂದ ಅವಕಾಶ ಕಲ್ಪಿಸಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಇಂದು ಸಿದ್ಧತೆಗಳನ್ನು ಪರಿಶೀಲಿಸಿದರು. ಹಾಸನಾಂಬೆ ದರ್ಶನ ಪಡೆದ ಅವರು, ಸಾರ್ವಜನಿಕರಿಗೆ ಕಲ್ಪಿಸಿರುವ ಸೌಲಭ್ಯಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಭಕ್ತಾದಿಗಳಿಗೆ ದರ್ಶನ ಪಡೆಯಲು ಮತ್ತಷ್ಟು ಕ್ರಮಗಳನ್ನು ಕೈಗೊಳ್ಳುವಂತೆ ಅವರು ಅಧಿಕಾರಿಗಳಿಗೆ ಆದೇಶಿಸಿದರು.

<><><>

ಮಡಿಕೇರಿ ಬಳಿಯ ಕಾಟಕೇರಿಯ ಖಾಸಗಿ ವಸತಿ ಶಾಲೆಯಲ್ಲಿ ಅಗ್ನಿ ಅವಘಡದಲ್ಲಿ ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಗೆ ದಾಖಲಾಗಿರುವ ಮಕ್ಕಳು ಹಾಗೂ ಸಿಬ್ಬಂದಿಯನ್ನು ಮುಖ್ಯಮಂತ್ರಿ ಅವರ ಕಾನೂನು ಸಲಹೆಗಾರ ಹಾಗೂ ಶಾಸಕ ಎ.ಎಸ್.ಪೊನ್ನಣ್ಣ ಭೇಟಿ ಮಾಡಿ ಆರೋಗ್ಯ

ವಿಚಾರಿಸಿದರು. ವಸತಿ ಶಾಲೆಯವರ ನಿರ್ಲಕ್ಷ್ಯ ಇದ್ದಲ್ಲಿ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು. ಮೃತಪಟ್ಟ ವಿದ್ಯಾರ್ಥಿ ಕುಟುಂಬಕ್ಕೆ ೫ ಲಕ್ಷ ರೂಪಾಯಿ ಪರಿಹಾರ ಪ್ರಕಟಿಸಲಾಗಿದೆ ಎಂದರು.

<><><><>

ಮಂಡ್ಯ ಜಿಲ್ಲೆಯ ಮದ್ದೂರು ತಾಲೂಕಿನ ಕೆಆರ್‌ಎಸ್ ಕೊನೆ ಭಾಗದ ನಾಲಾ ಪ್ರದೇಶಕ್ಕೆ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ರಾಜ್ಯ ಉಪಾಧ್ಯಕ್ಷ ಹಾಗೂ ಶಾಸಕ ದಿನೇಶ್ ಗೂಳಿಗೌಡ ಅವರು ಭೇಟಿ ನೀಡಿ ರೈತರಿಂದ ಅಹವಾಲು ಸ್ವೀಕರಿಸಿದರು. ಕೆಆರ್‌ಎಸ್ ಕೊನೆ ಭಾಗದ ನಾಲೆಗಳಾದ ಕೊಪ್ಪ, ಕೌಡ್ಲೆ, ಕಿರಂಗೂರು, ಅಬಲವಾಡಿ, ಹೊಸಗಾವಿ ಸೇರಿದಂತೆ ಹಲವು ಭಾಗಗಳಿಗೆ ಭೇಟಿ ನೀಡಿ ನಾಲೆಗಳ ಸ್ಥಿತಿಗತಿ ಪರಿಶೀಲಿಸಿದರು. ನಾಲೆಗಳ ಆಧುನೀಕರಣ ಹಾಗೂ ನಾಲೆಯ ಕೊನೆಯ ಹಂತದವರೆಗೆ ನೀರು ಹರಿಸುವ ಸಂಬಂಧ ರೈತರೊಂದಿಗೆ ಚರ್ಚಿಸಿದರು.

<><><><>

ಬೆಂಗಳೂರು ದೂರದರ್ಶನ ಚಂದನ ವಾಹಿನಿಯಲ್ಲಿ ಪ್ರಸಾರವಾಗುತ್ತಿರುವ ಜನಪ್ರಿಯ ರಸಪ್ರಶ್ನೆ ಕಾರ್ಯಕ್ರಮ "ಥಟ್ ಅಂತ ಹೇಳಿ" ಐದು ಸಾವಿರ ಸಂಚಿಕೆಯ ಮಹಾಸಂಭ್ರಮದ ಹೊಸ್ತಿಲಲ್ಲಿದೆ. ದೇಶದ ವಾಹಿನಿಗಳ ಇತಿಹಾಸದಲ್ಲಿ ಒಂದೇ ಕಾರ್ಯಕ್ರಮ ಇಷ್ಟೊಂದು ಕಂತುಗಳನ್ನು ಪೂರೈಸಿ, ಯಶಸ್ವಿಯಾಗಿ ಮುನ್ನಡೆಯುತ್ತಿರುವುದು ಇದೇ ಮೊದಲು. ಲಿಮ್ಕಾ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್ ನಲ್ಲಿ ದಾಖಲಾಗಿರುವ ಈ ಕಾರ್ಯಕ್ರಮ ಇದೀಗ ಗಿನ್ನೆಸ್ ವಿಶ್ವದಾಖಲೆಯತ್ತ ದಾಪುಗಾಲಿಟ್ಟಿದೆ. ೨೦೦೨ರ ಜನವರಿ ೪ ರಂದು ಪ್ರಾರಂಭವಾದ ಈ ಕಾರ್ಯಕ್ರಮ ಇದೇ ೧೩ರಂದು ಐದು ಸಾವಿರದ ಸಂಚಿಕೆಯ ಪ್ರಸಾರಕ್ಕೆ ಸಜ್ಜಾಗಿದೆ. ಹೊಸ ಮೈಲಿಗಲ್ಲು ಸಂಚಿಕೆಯ ಚಿತ್ರೀಕರಣ ನಾಳೆ ಬೆಳಗ್ಗೆ ೧೦.೩೦ ಗಂಟೆಗೆ ಜಿಕೆವಿಕೆ ಆವರಣದಲ್ಲಿರುವ ಡಾ. ಬಾಬು ರಾಜೇಂದ್ರ ಪ್ರಸಾದ್ ಅಂತಾರಾಷ್ಟ್ರೀಯ ಕನ್ವೆನ್ಷನ್ ಸೆಂಟರ್‌ನಲ್ಲಿ ನಡೆಯಲಿದೆ. ಈ ಮಹತ್ವದ ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಅರಣ್ಯ ಸಚಿವ ಈಶ್ವರ ಖಂಡ್ರೆ ಮತ್ತಿತರ ಗಣ್ಯರು ಪಾಲ್ಗೊಳ್ಳುತ್ತಿದ್ದಾರೆ ಎಂದು ದೂರದರ್ಶನ ಕೇಂದ್ರ ದಕ್ಷಿಣ ವಲಯದ ಉಪಮಹಾ ನಿರ್ದೇಶಕ ಭಾಗ್ಯವಾನ್ ತಿಳಿಸಿದ್ದಾರೆ. ಕಾರ್ಯಕ್ರಮಗಳ ಉಸ್ತುವಾರಿ ಹಾಗೂ ನಿರ್ವಹಣೆಯ ಜವಾಬ್ದಾರಿ ನಿಭಾಯಿಸುತ್ತಿರುವ ಎಚ್.ಎನ್. ಆರತಿ, ಥಟ್ ಅಂತ ಹೇಳಿ ಕಾರ್ಯಕ್ರಮ ನಿರ್ಮಾಪಕರಾದ ಎಮ್.ಎನ್. ಚಂದ್ರಕಲಾ ಈ ಮಹತ್ವದ ಸಂಚಿಕೆಗಳ ನಿರ್ಮಾಣದಲ್ಲಿ ತೊಡಗಿರುವುದಾಗಿ ಅವರು ಮಾಹಿತಿ ನೀಡಿದ್ದಾರೆ.

<><><><>

ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯ ಆಯುಕ್ತರಾದ ಪೊಮ್ಮಲ ಸುನೀಲ್ ಕುಮಾರ್ ಇಂದು ಅಮೃತಹಳ್ಳಿ ಮುಖ್ಯ ರಸ್ತೆಯ ಬ್ಯಾಟರಾಯನಪುರದ ಬೆಂಗಳೂರು ಉತ್ತರ ನಗರ ಪಾಲಿಕೆಯ ನಿಯಂತ್ರಣ ಕೊಠಡಿಯಲ್ಲಿ ಫೋನ್ ಇನ್ ಕಾರ್ಯಕ್ರಮ ನಡೆಸಿದರು. ಹೆಚ್ಚಿನ

ಅಹವಾಲುಗಳು ರಸ್ತೆ ಗುಂಡಿಗಳ ಕುರಿತು ಬಂದ ಹಿನ್ನೆಲೆ, ಬೆಂಗಳೂರು ಉತ್ತರ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿನ ರಸ್ತೆ ಗುಂಡಿಗಳನ್ನು ತಕ್ಷಣ ಮುಚ್ಚಿ ದುರಸ್ತಿ ಕಾರ್ಯ ಕೈಗೊಳ್ಳುವಂತೆ ಸೂಚಿಸಿದರು.

<><><><>

ಮಕ್ಕಳ ಹಕ್ಕುಗಳು, ಸಂರಕ್ಷಣೆ ಹಾಗೂ ಮಕ್ಕಳ ಅಭಿವೃದ್ಧಿಗಾಗಿ ೧೦ ಅಂಶಗಳಿರುವ ಗೋಡೆಬರಹ ಬರೆಸುವುದು ಕಡ್ಡಾಯ. ಎಲ್ಲಾ ಅಧಿಕಾರಿಗಳು ಒಂದು ತಿಂಗಳೊಳಗಾಗಿ ಕಟ್ಟುನಿಟ್ಟಿನ ಕ್ರಮವಹಿಸಿ ವರದಿ ನೀಡಬೇಕು ಎಂದು ಯಾದಗಿರಿ ಹೆಚ್ಚುವರಿ ಜಿಲ್ಲಾಧಿಕಾರಿ ರಮೇಶ ಕೋಲಾರ ಹೇಳಿದ್ದಾರೆ. ಯಾದಗಿರಿಯಲ್ಲಿ ಜಿಲ್ಲಾ ಮಟ್ಟದ ಮಕ್ಕಳ ರಕ್ಷಣಾ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಪತ್ರಿಯೊಂದು ಶಿಕ್ಷಣ ಸಂಸ್ಥೆಗಳ ಆವರಣದಲ್ಲಿ ಗೋಡೆಬರಹ ಬರೆಸಲು ತಕ್ಷಣವೇ ಕ್ರಮ ಕೈಗೊಳ್ಳಬೇಕು ಎಂದರು.

<><><><>

ಸಚಿವ ಸಂಪುಟ ವಿಸ್ತರಣೆ ಮುಖ್ಯಮಂತ್ರಿಯವರ ಪರಮಾಧಿಕಾರವಾಗಿದ್ದು, ಸೋಮವಾರ ಅವರು ಈ ಕುರಿತು ಕರೆದಿರುವ ಔತಣಕೂಟದಲ್ಲಿ ತಾವು ಪಾಲ್ಗೊಳ್ಳುವುದಾಗಿ ಅರಣ್ಯ ಸಚಿವ ಈಶ್ವರ ಖಂಡ್ರೆ ಬಳ್ಳಾರಿಯಲ್ಲಿಂದು ತಿಳಿಸಿದ್ದಾರೆ. ಸಂಪುಟ ಸಹದ್ಯೋಗಿಗಳಿಗೆ ಆಡಳಿತ ವ್ಯವಸ್ಥೆಯಲ್ಲಿ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಈ ಸಭೆಯಲ್ಲಿ ಮುಖ್ಯಮಂತ್ರಿಯವರು ಮಾರ್ಗದರ್ಶನ ಮಾಡಲಿದ್ದಾರೆ ಎಂದರು.

<><><><>

ಇನ್‌ಕ್ಯುಬೇಶನ್ ಕೇಂದ್ರಗಳು ಹೊಸ ಆವಿಷ್ಕಾರಗಳನ್ನು ಬೆಳೆಸುವಲ್ಲಿ ಮತ್ತು ಆರಂಭಿಕ ಹಂತದ ಉದ್ಯಮಗಳಿಗೆ ಬೆಂಬಲ ನೀಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದು ಯಾದಗಿರಿ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಬಿ.ಸತೀಶಕುಮಾರ ಹೇಳಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>